# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 195
2. ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ವಿವೇಕಾನಂದ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 09.12.2025
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಸಕ್ಕರೆ ಕಾರ್ಖಾನೆಗೆ ಸರ್ಕಾರ ವಿವಿಧ ಕೆಲಸ ಅಭಿವೃದ್ಧಿ ಕಾರ್ಯಗಳಿಗೆ 2023ನೇ ಸಾಲಿನಿಂದ 2025ನೇ ಸಾಲಿನವರೆಗೆ ಎಷ್ಟು ಅನುದಾನವನ್ನು ನೀಡಲಾಗಿದೆ; ಈ ಅನುದಾನವನ್ನು ಯಾವ ಯಾವ ಕೆಲಸ ಕಾರ್ಯಗಳಿಗೆ ಸಕ್ಕರೆ ಕಾರ್ಖಾನೆ ಉಪಯೋಗ ಮಾಡಲಾಗಿದೆ (ವಿವರವಾದ ಪೂರ್ಣ ಮಾಹಿತಿ ನೀಡುವುದು); | ಮಂಡ್ಯದ ದಿ ಮೈಸೂರು ಷುಗರ್ ಕಂಪನಿಗೆ ದುಡಿಯುವ ಬಂಡವಾಳಕ್ಕಾಗಿ 2023-24ನೇ ಸಾಲಿನಲ್ಲಿ ರೂ.50.00 ಕೋಟಿಗಳನ್ನು ಮತ್ತು 2025-26ನೇ ಸಾಲಿನಲ್ಲಿ ರೂ.10.00 ಕೋಟಿಗಳನ್ನು ಸೇರಿ ಒಟ್ಟು ರೂ.60.00 ಕೋಟಿಗಳನ್ನು ರಾಜ್ಯ ಸರ್ಕಾರದಿಂದ ಸಾಲವಾಗಿ ಬಿಡುಗಡೆಗೊಳಿಸಲಾಗಿರುತ್ತದೆ. ಈ ಮೊತ್ತವನ್ನು ಕಬ್ಬು ಸರಬರಾಜುದಾರರಿಗೆ, ಕಬ್ಬು ಸಾಗಾಣಿಕೆ ವೆಚ್ಚ, ಕಬ್ಬು ಕಟಾವು ವೆಚ್ಚ, ವಿದ್ಯುತ್ ಬಿಲ್ಲು, ಇ.ಎಂ.ಡಿ ಮೊತ್ತ, ಕಂಪನಿಯ ನವೀಕರಣ ಶುಲ್ಕ, ವಿಮೆ ಶುಲ್ಕ, ಅಧಿಕಾರಿಗಳ / ನೌಕರರ ವೇತನಕ್ಕೆ ವಿನಿಯೋಗಿಸಲಾಗಿದ್ದು, ವಿವರಗಳನ್ನು **ಅನುಬಂಧ-1** ಮತ್ತು **ಅನುಬಂಧ-2 ರಲ್ಲಿ** ಒದಗಿಸಿದೆ.<br>ಮುಂದುವರಿದು, ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ – ಈ ಕಂಪನಿಯು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿಗೆ ಪಾವತಿಸಬೇಕಾಗಿದ್ದ ವಿದ್ಯುತ್ ಬಾಕಿಯಲ್ಲಿನ ಶೇ.50.00 ರಷ್ಟನ್ನು ರಾಜ್ಯ ಸರ್ಕಾರದಿಂದ ಪಾವತಿಸಲು ದಿನಾಂಕ:13.12.2024ರಂದು ಜರುಗಿದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಅದರಂತೆ, 2025-26ನೇ ಸಾಲಿನ ಆಯವ್ಯಯದಲ್ಲಿ ರೂ.18.88 ಕೋಟಿಗಳ ಮೊತ್ತವನ್ನು ಹಂಚಿಕೆ ಮಾಡಲಾಗಿರುತ್ತದೆ. ಸದರಿ ಮೊತ್ತದಲ್ಲಿ ರೂ.9.44 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದ್ದು, ಉಳಿದ 9.44 ಕೋಟಿಗಳನ್ನು ಬಿಡುಗಡೆಗೊಳಿಸುವುದು ಬಾಕಿ ಇರುತ್ತದೆ. |
| (ಆ) | ರೈತರು ಸರಬರಾಜು ಮಾಡಿದ ಕಬ್ಬಿಗೆ ಪೂರ್ಣ ಪ್ರಮಾಣದಲ್ಲಿ ಹಣವನ್ನು ನೀಡಲಾಗಿದೆಯೇ; ನೀಡಿದಿದ್ದಲ್ಲಿ ರೈತರಿಗೆ ಮಂಡ್ಯ ಸಕ್ಕರೆ ಕಾರ್ಖಾನೆಯಿಂದ ಎಷ್ಟು ಬಾಕಿ ಹಣವನ್ನು ನೀಡಬೇಕಾಗಿದೆ; | 2025-26ನೇ ಹಂಗಾಮಿನಲ್ಲಿ ಒಟ್ಟು 1,19,206 ಮೆ.ಟನ್ ಕಬ್ಬು ಅರೆಯಲಾಗಿದ್ದು, ಸದರಿ ಪ್ರಮಾಣದ ಕಬ್ಬಿಗೆ ಒಟ್ಟು ರೂ.39,23,06,946.00 ಗಳ ಕಬ್ಬು ಬಿಲ್ ಅನ್ನು ಪಾವತಿಸಬೇಕಾಗಿದ್ದು, ಕಬ್ಬು ಸರಬರಾಜು ಮಾಡಿದ ರೈತರ ಸಂಖ್ಯೆ:1773 ಆಗಿರುತ್ತದೆ. ದಿನಾಂಕ:27.11.2025ರವರೆಗೆ ಒಟ್ಟು 1553 ರೈತರಿಗೆ 1,10,293.00 ಮೆ.ಟನ್ ಕಬ್ಬಿಗೆ ರೂ.36,29,74,263.00 ಗಳ ಮೊತ್ತವನ್ನು ಪಾವತಿಸಲಾಗಿರುತ್ತದೆ. ಉಳಿದಂತೆ, 8913 ಮೆ.ಟನ್ ಕಬ್ಬು ಸರಬರಾಜು ಮಾಡಿದ 243 ರೈತರಿಗೆ ರೂ.2,93,32,683.00 ಗಳ ಮೊತ್ತವನ್ನು ಪಾವತಿಸುವುದು ಬಾಕಿ ಇರುತ್ತದೆ. |

...2

| | | |
|---|---|---|
| (ಇ) | ಸರ್ಕಾರ ಕಬ್ಬು ಬೆಳೆಗಾರರಿಗೆ ನೀಡುತ್ತಿರುವ ಕಬ್ಬಿನ ಬೆಲೆಯು ಬಹಳ ಕಡಿಮೆಯಾಗಿದ್ದು ರೈತರು ತುಂಬಾ ತೊಂದರೆಗೆ ಒಳಗಾಗಿರುವುದರಿಂದ ಸರ್ಕಾರ ಕಬ್ಬಿನ ಬೆಲೆಯನ್ನು ಹೆಚ್ಚಳ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ ? | ಭಾರತ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಪತ್ರ ಸಂಖ್ಯೆ:No.3(1)/2024-SP-i, Dated: 06.05.2025 ರಲ್ಲಿ ನಿಗದಿಪಡಿಸಿದ ಮಾರ್ಗಸೂಚಿಗಳನ್ವಯ, 2025-26ನೇ ಹಂಗಾಮಿನಲ್ಲಿ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಪ್ರತಿಯೊಂದು ಸಕ್ಕರೆ ಕಾರ್ಖಾನೆಗಳು ರೈತರಿಗೆ ಪಾವತಿಸಬೇಕಾದ ಕಬ್ಬಿನ ಬೆಲೆಯ ಕುರಿತು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಆದೇಶ ಸಂಖ್ಯೆ:ಡಿಎಸ್‌ಕೆ/ಎಸ್‌ಟಿಟಿ/01/2025-26, ದಿನಾಂಕ: 11.06.2025 ರಲ್ಲಿ ಆದೇಶಿಸಲಾಗಿತ್ತು. ಆದೇಶದ ಪ್ರತಿಯನ್ನು **ಅನುಬಂಧ-3 ರಲ್ಲಿ** ಒದಗಿಸಿದೆ.<br>ಮುಂದುವರೆದು, ರಾಜ್ಯದ ಕಬ್ಬು ಬೆಳೆಗಾರರ ಸಮಸ್ಯೆಗಳು ಮತ್ತು ಬೇಡಿಕೆಗಳ ಕುರಿತಂತೆ ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳ ಮಾಲೀಕರು / ಪ್ರತಿನಿಧಿಗಳೊಂದಿಗೆ ಹಾಗೂ ರಾಜ್ಯದ ಕಬ್ಬು ಬೆಳೆಗಾರ ಸಂಘಟನೆಗಳ ರೈತ ಮುಖಂಡರು ಮತ್ತು ರೈತರೊಂದಿಗೆ ದಿನಾಂಕ:07.11.2025 ರಂದು ಜರುಗಿದ ಸಭೆಗಳಲ್ಲಿ ತೀರ್ಮಾನಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ: ಸಿಐ 324 ಎಸ್‌ಜಿಎಫ್ 2025, ದಿನಾಂಕ: 08.11.2025ರಲ್ಲಿ, 2025-26ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಸಂಬಂಧಿಸಿದ ಸಕ್ಕರೆ ಕಾರ್ಖಾನೆಗಳು ಇಳುವರಿಯನ್ನು ಆಧರಿಸಿ ಪಾವತಿಸಬೇಕಾದ ಕನಿಷ್ಠ ಹೆಚ್ಚುವರಿ ಕಬ್ಬು ಬೆಲೆಯ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಮುಂದುವರಿದು, ಸದರಿ ಆದೇಶದಲ್ಲಿ, 2025-26ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಸಕ್ಕರೆ ಕಾರ್ಖಾನೆಗಳು ಪ್ರತಿ ಮೆ.ಟನ್ ಕಬ್ಬಿಗೆ ರೂ.50.00 ಗಳ ಹೆಚ್ಚುವರಿ ಕಬ್ಬು ಬೆಲೆಯನ್ನು ಪಾವತಿಸುವಂತೆ ಹಾಗೂ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ಪ್ರತಿ ಮೆ.ಟನ್ ಕಬ್ಬಿಗೆ ರೂ.50.00ಗಳ ಆರ್ಥಿಕ ನೆರವನ್ನು ನೀಡಲು ಆದೇಶಿಲಾಗಿದೆ. ಆದೇಶದ ಪ್ರತಿಯನ್ನು **ಅನುಬಂಧ-4** ರಲ್ಲಿ ಒದಗಿಸಿದೆ. |

**ಸಂಖ್ಯೆ:** ಸಿಐ 364 ಸಿಓಎಫ್ 2025

**(ಶಿವಾನಂದ ಎಸ್ ಪಾಟೀಲ್)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು

ಅನುಬಂಧ -1

# ಮೈಸೂರು ಸಕ್ಕರೆ ಕಂಪನಿ ನಿಯಮಿತ, ಮಂಡ್ಯ

2023-24 ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ ಆಇ 191 ವೆಚ್ಚ 1/2-022 ದಿನಾಂಕ 14.06.20 ರ ಕಬ್ಬು ಅರೆಯುವ ಉದ್ದೇಶಕ್ಕಾಗಿ / ದುಡಿಯುವ ಬಂಡವಾಳಕ್ಕಾಗಿ ಆರ್ಥಿಕ ಇಲಾಖೆ ವತಿಯಿಂದ ಬ್ಯಾಂಕ್ ಖಾ ಸಂಖ್ಯೆ 64085713755 ಎಸ್.ಬಿ.ಐ. ವಿಧಾನಸೌಧ ಶಾಖೆಯಿಂದ ರೂ.5000 ಲಕ್ಷಗಳ ಸಾಲ ಬಿಡುಗಡೆಯಾಗಿರು ಸಂಬಂಧ ವಿವಿಧ ಬಾಬ್ತುಗಳ ವೆಚ್ಚಗಳ ಉಪಯುಕ್ತತಾ ಪ್ರಮಾಣ ಪತ್ರ.

## ಉಪಯುಕ್ತತಾ ಪ್ರಮಾಣ ಪತ್ರ

ರೂ.ಲಕ್ಷಗಳಲ್ಲಿ

| ಕ್ರಮ. ಸಂ. | ವಿವರ | ಸರ್ಕಾರದಿಂದ ಬಿಡುಗಡೆಯಾದ ಮೊತ್ತ | ಬಳಕೆಯಾದ ಹಣದ ವಿವರ |
|---|---|---|---|
| 01 | ದುಡಿಯುವ ಬಂಡವಾಳ | 5000.00 | |
| 02 | ಮೆ:ಆರ್.ಬಿ. ಟೆಕ್ನಾಲಜಿ (ದುರಸ್ತಿ ಮತ್ತು ನಿರ್ವಹಣೆ) | 0.00 | 1297.54 |
| 03 | ಕಬ್ಬು ಕಟಾವು ಮೇಸ್ತ್ರಿಗಳಿಗೆ ಮುಂಗಡ | 0.00 | 93.70 |
| 04 | ವಿದ್ಯುತ್ ಬಿಲ್ ಬಾಕಿ ಪಾವತಿ | 0.00 | 500 |
| 05 | ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ | 0.00 | 23.94 |
| 06 | ಕಬ್ಬು ಕಟಾವು ಕೂಲಿ, ಸಾರಿಗೆ, ಮತ್ತು ಅಂತಿಮ ಬಟವಾಡೆ | 0.00 | 3036.31 |
| 07 | ಕರ್ನಾಟಕ ರೂರಲ್ ಇನ್ಫ್ರಾಸ್ಟ್ರಕ್ಚರ್ ಡೆವೆಲಪ್‌ಮೆಂಟ್ ಲಿ.,(ಕೆ.ಆರ್.ಬಿ.ಸಿ.) | 0.00 | 48.51 |
| | ಒಟ್ಟು | **5000.00** | **5000.00** |

ದಿನಾಂಕ 13-10-2023

ಮುಖ್ಯ ಹಣಕಾಸು ಅಧಿಕಾರಿ

Scanned with OKEN Scanner

# ಮೈಸೂರು ಸಕ್ಕರೆ ಕಂಪನಿ ನಿ,. ಮಂಡ್ಯ

ಅನುಬಂಧ -2

2025–26 ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಸರ್ಕಾರದ ಆದೇಶ ಸಂಖ್ಯೆ ಸಿಐ 55 ಸಿಓಎಫ್ 2025 ಬೆಂಗಳೂರು ದಿನಾಂಕ 19–07–2025 ರಂತೆ ಲೆಕ್ಕಶೀರ್ಷಿಕೆ ಬಂಡವಾಳ ವೆಚ್ಚ ಹಾಗೂ ಬಂಡವಾಳ ಕಾಮಗಾರಿಗಳಿಗೆ ದುಡಿಯುವ ಬಂಡವಾಳವಾಗಿ 6860–04–190–2–01–394ವಿ–ಸಾಲಗಳು ರಡಿಯಲ್ಲಿ ರೂ.1000 ಲಕ್ಷಗಳನ್ನು ಸಾಲವಾಗಿ ಬಿಡುಗಡೆ ಮಾಡಿರುವ ಉಪಯುಕ್ತತಾ ಪ್ರಮಾಣ ಪತ್ರ.

## ಉಪಯುಕ್ತತಾ ಪ್ರಮಾಣ ಪತ್ರ

| ಕ್ರಮ ಸಂಖ್ಯೆ | ಉದ್ದೇಶಗಳ ವಿವರ | ಸರ್ಕಾರದಿಂದ ಬಿಡುಗಡೆಯಾದ ಮೊತ್ತದ ವಿವರ | ಬಿಡುಗಡೆಯಾದ ಹಣದ ಬಳಕೆಯ ವಿವರ |
|---|---|---|---|
| | | 10000.00 | |
| 1 | ಕಬ್ಬು ಸಾಗಾಣಿಕೆ ವೆಚ್ಚ | | 22.65 |
| 2 | ಅಧಿಕಾರಿಗಳ/ನೌಕರರ ವೇತನ | | 92.24 |
| 3 | ಸರಬರಾಜುದಾರರಿಗೆ | | 17.41 |
| 4 | ಕಬ್ಬು ಕಟಾವು ಮೇಸ್ತ್ರಿಗಳಿಗೆ | | 275.40 |
| 5 | ಕಬ್ಬು ಕಟಾವು ಮೇಸ್ತ್ರಿಗಳಿಗೆ ಮುಂಗಡ | | 7.50 |
| 6 | ಆರ್.ಬಿ.ಟೆಕ್ನೋ,ಮಹಾರಾಷ್ಟ್ರ | | 468.28 |
| 7 | ಶಾಸನ ಬದ್ದ ಪಾವತಿ | | 16.86 |
| 8 | ವಿಮೆ | | 0.71 |
| 9 | ಸ್ವಚ್ಚತಾ ಕಾರ್ಯಕ್ಕೆ | | 0.78 |
| 10 | ಸಾಗಾಣಿಕೆ ವೆಚ್ಚ | | 73.99 |
| 11 | ಸಾಮಾನ್ಯ ವೆಚ್ಚ | | 8.69 |
| 12 | ಇ.ಎಂ.ಡಿ. ಮರುಪಾವತಿ | | 6.45 |
| 13 | ವಿದ್ಯುತ್ | | 8.03 |
| 14 | ಪೆಟ್ರೋಲ್ / ಡೀಸೆಲ್ | | 0.86 |
| 15 | ಇತರೆ | | 0.15 |
| | | ಒಟ್ಟು | 1000.00 |

MW- 2025-26 UTILISATION 4

ಸ್ಥಳ:ಮಂಡ್ಯ
ದಿನಾಂಕ:

ಮುಖ್ಯ ಹಣಕಾಸು ಅಧಿಕಾರಿ

Scanned with OKEN Scanne

ಅನುಬಂಧ -3

**ಆಯುಕ್ತರು**
ಕಬ್ಬು ಅಭಿವೃದ್ಧಿ ಹಾಗೂ
ಸಕ್ಕರೆ ನಿರ್ದೇಶಕರು

**ಕರ್ನಾಟಕ ಸರ್ಕಾರ**

5ನೇ ಮಹಡಿ, ಎಫ್ ಬ್ಲಾಕ್, ಸಿಬಿಎಬಿ ಸಂಕೀರ್ಣ, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009
ದೂರವಾಣಿ: 080-22133390/22133392 ಫ್ಯಾಕ್ಸ್: 08022133391
ಇಮೇಲ್: canecommissioner@gmail.com
ವೆಬ್ ಸೈಟ್: www.canecommissionarate.karnataka.gov.in

ಸಂಖ್ಯೆ: ಡಿಎಸ್‌ಕೆ/ಎಸ್‌ಟಿಟಿ/01/2025-26 ದಿನಾಂಕ: 11.06.2025

HS?

ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ
ಸಕ್ಕರೆ ಕಾರ್ಖಾನೆಗಳ ಅಧ್ಯಕ್ಷರು/ ವ್ಯವಸ್ಥಾಪಕ ನಿರ್ದೇಶಕರು/
ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು/
ಪ್ರಧಾನ ವ್ಯವಸ್ಥಾಪಕರುಗಳಿಗೆ.

ಮಾನ್ಯರೆ,

ವಿಷಯ :- 2024-25ನೇ ಸಾಲಿನಲ್ಲಿ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಸಕ್ಕರೆ ಕಾರ್ಖಾನೆಗಳು ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯ ಆಧಾರದ ಮೇಲೆ 2025-26ನೇ ಸಾಲಿಗೆ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಎಫ್.ಆರ್.ಪಿ) ಪ್ರಕಟಣೆಯ ಬಗ್ಗೆ.

ಉಲ್ಲೇಖ :-
1. ಗ್ರಾಹಕ ವ್ಯವಹಾರ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಕೃಷಿ ಭವನ, ನವದೆಹಲಿ ಇವರ ಪತ್ರ, ಸಂಖ್ಯೆ: 3(1)/2024-ಎಸ್‌ಪಿ-I ದಿನಾಂಕ: 06.05.2025
2. ಈ ಕಛೇರಿಯ ಸಮ ಸಂಖ್ಯೆ ಪತ್ರ, ದಿನಾಂಕ: 30.05.2025

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಉಲ್ಲೇಖ (1)ರ ಪತ್ರದಂತೆ 2025-26ನೇ ಸಕ್ಕರೆ ಹಂಗಾಮಿಗೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು (ಎಫ್.ಆರ್.ಪಿ) ನಿಗದಿಪಡಿಸಿರುತ್ತದೆ. 2024-25ನೇ ಸಾಲಿನಲ್ಲಿ ಕಾರ್ಯ ನಿರ್ವಹಿಸಿರುವ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಸಕ್ಕರೆ ಕಾರ್ಖಾನೆಗಳು ಸಲ್ಲಿಸಿರುವ ಅಂತಿಮ ಉತ್ಪಾದನಾ ವರದಿ (RT 8(C)) ಗಳ ಪ್ರಕಾರ ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯಂತೆ 2025-26ನೇ ಕಬ್ಬು ನುರಿಸುವ ಹಂಗಾಮಿಗೆ ರಾಜ್ಯದ ಸಕ್ಕರೆ ಕಾರ್ಖಾನೆಗಳು ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2014ರ ಕಲಂ 9(1) ರ ಪ್ರಕಾರ ಮೊದಲ ಕಂತಿನರೂಪದಲ್ಲಿ ಪಾವತಿಸಬೇಕಾದ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು ಪ್ರಕಟಿಸಲು ಉದ್ದೇಶಿಸಲಾಗಿದೆ. ಈ ಕಬ್ಬಿನ ದರವು

ಎಫ್.ಆರ್.ಪಿ. ನಿಯಮದಂತೆ ಎಕ್ಸ್-ಗೇಟ್ ದರವಾಗಿರುತ್ತದೆ. 2025-26ನೇ ಹಂಗಾಮಿನಲ್ಲಿ ಪ್ರತಿ ಮೆ.ಟನ್ ಕಬ್ಬಿಗೆ ಪಾವತಿಸಬೇಕಾದ ಎಫ್.ಆರ್.ಪಿ. ದರವನ್ನು ಕಾರ್ಖಾನೆವಾರು ಲೆಕ್ಕಾಚಾರ ಮಾಡಿ, ಕರಡು ಆದೇಶದ ಪ್ರತಿಯನ್ನು ಲಗತ್ತಿಸಿ, ಈ ಬಗ್ಗೆ ನಿಮ್ಮ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಏಳು ದಿನಗಳೊಳಗಾಗಿ ಈ ನಿರ್ದೇಶನಾಲಯಕ್ಕೆ ಸಲ್ಲಿಸಲು ಉಲ್ಲೇಖ (2) ರ ಪತ್ರದಲ್ಲಿ ಸೂಚಿಸಲಾಗಿತ್ತು. ಆದರೆ ಇಲ್ಲಿಯವರೆಗೂ ಕಾರ್ಖಾನೆಗಳ ವತಿಯಿಂದ ಯಾವುದೇ ಆಕ್ಷೇಪಣೆಗಳು ಬಂದಿರುವುದಿಲ್ಲ.

ಆದ್ದರಿಂದ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಸಕ್ಕರೆ ಕಾರ್ಖಾನೆಗಳು 2025-26ನೇ ಸಾಲಿಗೆ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಎಫ್.ಆರ್.ಪಿ) ಅಂತಿಮ ಆದೇಶವನ್ನು ಹೊರಡಿಸಿದೆ ಹಾಗೂ ಇದರ ಪ್ರತಿಯನ್ನು ಕಾರ್ಖಾನೆಯ ಸೂಚನಾ ಫಲಕದಲ್ಲಿ ಪ್ರಕಟಿಸಿ, ಕಬ್ಬು ಬೆಳೆಗಾರ ರೈತರ ಗಮನಕ್ಕೆ ತರಲು ಸಹ ಸೂಚಿಸಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ
ಸಕ್ಕರೆ ನಿರ್ದೇಶಕರು

**ಆಯುಕ್ತರು**
ಕಬ್ಬು ಅಭಿವೃದ್ಧಿ ಹಾಗೂ
ಸಕ್ಕರೆ ನಿರ್ದೇಶಕರು

**ಕರ್ನಾಟಕ ಸರ್ಕಾರ**

5ನೇ ಮಹಡಿ, ಎಫ್ ಬ್ಲಾಕ್, ಸಿಬಿಎಬಿ ಸಂಕೀರ್ಣ, ಕೆಹೆಚ್‌ಬಿ
ಕಟ್ಟಡ, ಕಾವೇರಿ ಭವನ, ಕೆ.ಜಿ.ರಸ್ತೆ ಬೆಂಗಳೂರು- 560 009
ದೂರವಾಣಿ: 080-22133390/22133392 ಫ್ಯಾಕ್ಸ್: 08022133391
ಇಮೇಲ್: canecommissioner@gmail.com
ವೆಬ್ ಸೈಟ್: www.canecommissionerate.karnataka.gov.in

ವಿಷಯ:- 2024-25ನೇ ಸಾಲಿನಲ್ಲಿ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಸಕ್ಕರೆ ಕಾರ್ಖಾನೆಗಳು ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯ ಆಧಾರದ ಮೇಲೆ 2025-26ನೇ ಸಾಲಿಗೆ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆ (Fair and Remunerative Price) ಪ್ರಕಟಣೆಯ ಕುರಿತು.

ಉಲ್ಲೇಖ:- ಗ್ರಾಹಕ ವ್ಯವಹಾರ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಕೃಷಿ ಭವನ, ನವದೆಹಲಿ ಇವರ ಪತ್ರ ಸಂ: 3(1)/2024-ಎಸ್‌ಪಿ-I ದಿನಾಂಕ 06.05.2024

-*-

**ಪೀಠಿಕೆ:**

ಕೇಂದ್ರ ಸರ್ಕಾರವು ಉಲ್ಲೇಖ (1) ರಂತೆ 2025-26ನೇ ಸಕ್ಕರೆ ಹಂಗಾಮಿಗೆ ಈ ಕೆಳಗಿನಂತೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು (Fair and Remunerative Price) ನಿಗದಿಪಡಿಸಿದೆ.

1. ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ ರೂ.3550/-
2. ಶೇಕಡ 10.25 ಕ್ಕೆ ಮೇಲ್ಪಟ್ಟು ಇಳುವರಿಗೆ ನಂತರದ ಶೇಕಡ 1 ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.346/- ರಂತೆ ಹೆಚ್ಚುವರಿ ಬೆಲೆ.
3. ಶೇಕಡ 10.25 ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಶೇಕಡ 1 ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.346/-ರ ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು
4. ಶೇಕಡ 9.50 ಅಥವಾ 9.50ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ಕನಿಷ್ಠ ರೂ.3290.5/- ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ.

2024-25ನೇ ಸಾಲಿನಲ್ಲಿ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಿರುವ 08 ಸಕ್ಕರೆ ಕಾರ್ಖಾನೆಗಳು ಸಲ್ಲಿಸಿದ ಆರ್.ಟಿ 8(ಸಿ) ವರದಿಗಳ ಪ್ರಕಾರ ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯಂತೆ 2025-26ನೇ ಕಬ್ಬು ನುರಿಸುವ ಹಂಗಾಮಿಗೆ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಸಕ್ಕರೆ ಕಾರ್ಖಾನೆಗಳು ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ-2014ರ ಕಲಂ 9(1) ರ ಪ್ರಕಾರ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯಯುತ ಮತ್ತು

ಲಾಭದಾಯಕ ಬೆಲೆಯನ್ನು (Fair and Remunerative Price) ಪ್ರಕಟಿಸಲಾಗಿದೆ. ಈ ಕಬ್ಬಿನ ದರವು ಎಫ್.ಆರ್.ಪಿ. ನಿಯಮದಂತೆ ಎಕ್ಸ್-ಗೇಟ್‌ದರವಾಗಿರುತ್ತದೆ.

ಸದರಿ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಸಕ್ಕರೆ ಕಾರ್ಖಾನೆವಾರು ನ್ಯಾಯಯುತ ಮತ್ತು ಲಾಭದಾಯಕ ಬೆಲೆ (Fair and Remunerative Price) ನಿಗದಿಗೊಳಿಸುವ ಸಂಬಂಧ ಈ ಕೆಳಕಂಡ ಆದೇಶ ಹೊರಡಿಸಿದೆ.

## ಆದೇಶ

ಸಂಖ್ಯೆ: ಡಿಎಸ್‌ಕೆ/ಎಸ್‌ಟಿಟಿ/01/2025-26 ದಿನಾಂಕ:11.06.2025

ಕೇಂದ್ರ ಸರ್ಕಾರವು ಉಲ್ಲೇಖ (1) ರಂತೆ 2025-26ನೇ ಸಕ್ಕರೆ ಹಂಗಾಮಿಗೆ ನಿಗದಿಪಡಿಸಿರುವ ನ್ಯಾಯ ಮತ್ತು ಲಾಭದಾಯಕ ದರದ (Fair and Remunerative Price) ಆಧಾರದ ಮೇಲೆ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಅಧಿನಿಯಮ, 2013 ಮತ್ತು ತಿದ್ದುಪಡಿ ಅಧಿನಿಯಮ 2014ರ ಕಲಂ 2(ii)(ಇಎ) ಮತ್ತು 9(1) ರನ್ವಯ ದತ್ತವಾದ ಅಧಿಕಾರವನ್ನು ಚಲಾಯಿಸಿ ಎಂ.ಆರ್. ರವಿಕುಮಾರ್, ಭಾ.ಆ.ಸೇ., ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಬೆಂಗಳೂರು ಆದ ನಾನು 2024-25ನೇ ಸಾಲಿನಲ್ಲಿ ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಿರುವ 08 ಸಕ್ಕರೆ ಕಾರ್ಖಾನೆಗಳು ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯನ್ನು ಆಧಾರವಾಗಿಟ್ಟುಕೊಂಡು 2025-26ನೇ ಸಾಲಿಗೆ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2014ರ ಕಲಂ 9(1)ರ ಪ್ರಕಾರ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು (Fair and Remunerative Price) ಈ ಕೆಳಕಂಡಂತೆ ಅಧಿಕೃತವಾಗಿ ಪ್ರಕಟಿಸಿರುತ್ತೇನೆ. ಈ ಕಬ್ಬಿನ ದರವು ಎಫ್.ಆರ್.ಪಿ. ನಿಯಮದಂತೆ ಎಕ್ಸ್-ಗೇಟ್ ದರವಾಗಿರುತ್ತದೆ. ಈ ಪ್ರಕಟಣೆಯಲ್ಲಿನ ಅಂಕಿ ಅಂಶಗಳು ಕೇಂದ್ರ ಸರ್ಕಾರವು ಹೊರಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ (Fair and Remunerative Price) ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

| ಕ್ರ. ಸಂ | ಕಾರ್ಖಾನೆಯ ಹೆಸರು | 2024-25ನೇ ಸಾಲಿನಲ್ಲಿ (01.07.2024 ರಿಂದ 30.06.2025) ರವರೆಗೆ | | | 2025-26ನೇ ಸಾಲಿಗೆ ಪ್ರತಿ ಮೆ.ಟನ್ ಕಬ್ಬಿಗೆ ಪಾವತಿಸಬೇಕಾದ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಎಫ್‌ಆರ್‌ಪಿ) (ರೂ.ಗಳಲ್ಲಿ) |
|---|---|---|---|---|---|
| | | ನುರಿಸಿದ ಕಬ್ಬಿನ ಪ್ರಮಾಣ (ಮೆ. ಟನ್‌ಗಳಲ್ಲಿ) | ಉತ್ಪಾದಿಸಿದ ಸಕ್ಕರೆ ಪ್ರಮಾಣ (ಮೆ.ಟನ್‌ಗಳಲ್ಲಿ) | ಶೇಕಡ ಇಳುವರಿ (%) | |
| | **ಚಾಮರಾಜನಗರ ಜಿಲ್ಲೆ** | | | | |
| 1 | ಬನ್ನಾರಿ ಅಮ್ಮನ್ ಶುಗರ್ಸ್ ಲಿ., ಯುನಿಟ್-III, ಕುಂತೂರು ಗ್ರಾಮ, ತಾಲ್ಲೂಕು: ಕೊಳ್ಳೇಗಾಲ, ಜಿಲ್ಲೆ: ಚಾಮರಾಜನಗರ. | 589111 | 52918 | 8.95 | 3291 |

| | | | | | |
|---|---|---|---|---|---|
| | **ಹಾಸನ ಜಿಲ್ಲೆ** | | | | |
| 2 | ಚಾಮುಂಡೇಶ್ವರಿ ಶುಗರ್ಸ್ ಲಿ., (ಹೇಮಾವತಿ ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು), ಶ್ರೀನಿವಾಸಪುರ ತಾಲ್ಲೂಕು: ಚನ್ನರಾಯಪಟ್ಟಣ ಜಿಲ್ಲೆ:ಹಾಸನ | 413707 | 38433 | 9.29 | 3291 |
| | **ಮಂಡ್ಯ ಜಿಲ್ಲೆ** | | | | |
| 3 | ಕೋರಮಂಡಲ್ ಶುಗರ್ಸ್ ಲಿ., ಮಾಕವಳ್ಳಿ ತಾಲ್ಲೂಕು: ಕೆ.ಆರ್.ಪೇಟೆ ಜಿಲ್ಲೆ: ಮಂಡ್ಯ | 484880 | 44100 | 9.10 | 3291 |
| 4 | ಮೈಸೂರು ಸಕ್ಕರೆ ಕಂಪನಿ ನಿ., ಸಕ್ಕರೆ ನಗರ, ಜಿಲ್ಲೆ: ಮಂಡ್ಯ | 199888 | 12685 | 6.35 | 3291 |
| 5 | ಎಂ.ಆರ್.ಎನ್ ಕೇನ್ ಪವರ್ ಅಂಡ್ ಬಯೋರಿಫೈನರೀಸ್ ಪ್ರೈ ಲಿ., (ಪಾಂಡವಪುರ ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು), ತಾಲ್ಲೂಕು: ಪಾಂಡವಪುರ, ಜಿಲ್ಲೆ: ಮಂಡ್ಯ | 613354 | 54940 | 8.90 | 3291 |
| 6 | ಎನ್.ಎಸ್.ಎಲ್ ಶುಗರ್ಸ್ ಲಿ., ಕೊಪ್ಪ ತಾಲ್ಲೂಕು: ಮದ್ದೂರು, ಜಿಲ್ಲೆ:ಮಂಡ್ಯ | 622918 | 56134 | 9.00 | 3291 |
| 7 | ಶ್ರೀ ಚಾಮುಂಡೇಶ್ವರಿ ಶುಗರ್ಸ್ ಲಿ., ಭಾರತಿ ನಗರ, ತಾಲ್ಲೂಕು: ಮದ್ದೂರು, ಜಿಲ್ಲೆ:ಮಂಡ್ಯ | 766956 | 70781 | 9.22 | 3291 |
| | **ಮೈಸೂರು ಜಿಲ್ಲೆ** | | | | |
| 8 | ಬನ್ನಾರಿ ಅಮ್ಮನ್ ಶುಗರ್ಸ್ ಲಿ., ಅಲಗಂಚಿ ಗ್ರಾಮ, ತಾಲ್ಲೂಕು: ನಂಜನಗೂಡು, ಜಿಲ್ಲೆ: ಮೈಸೂರು | 1006892 | 91016 | 9.03 | 3291 |

ಈ ಆದೇಶವನ್ನು ನನ್ನ ಹಸ್ತಾಕ್ಷರ ಮತ್ತು ಕಛೇರಿ ಮೊಹರಿನೊಂದಿಗೆ ದಿನಾಂಕ:11.06.2025 ರಂದು ಹೊರಡಿಸಿರುತ್ತೇನೆ.

ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ
ಸಕ್ಕರೆ ನಿರ್ದೇಶಕರು

ಇವರಿಗೆ:

ರಾಜ್ಯದ ಚಾಮರಾಜನಗರ, ಹಾಸನ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿರುವ ಸಕ್ಕರೆ ಕಾರ್ಖಾನೆಗಳ ಅಧ್ಯಕ್ಷರು/ ವ್ಯವಸ್ಥಾಪಕ ನಿರ್ದೇಶಕರು/ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು/ ಪ್ರಧಾನ ವ್ಯವಸ್ಥಾಪಕರುಗಳು.

ಪ್ರತಿಯನ್ನು:

1. ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

2. ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಜಿಲ್ಲಾಧಿಕಾರಿಗಳು, ಚಾಮರಾಜನಗರ / ಹಾಸನ / ಮಂಡ್ಯ / ಮೈಸೂರು ಇವರುಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

ಅನುಬಂಧ-4

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2025-26ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಹೆಚ್ಚುವರಿ ಕಬ್ಬು ಬೆಲೆ ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:**

1. ಕೇಂದ್ರ ಸರ್ಕಾರದ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ಪತ್ರ ಸಂಖ್ಯೆ: 3(1)/2024-ಎಸ್‌ಪಿ-I, ದಿನಾಂಕ:06.05.2025
2. ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಆದೇಶ ಸಂಖ್ಯೆ: ಡಿಎಸ್ ಕೆ/ಎಸ್‌ಟಿಟಿ/01/202-26, ದಿನಾಂಕ:15.09.2025
3. ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಪತ್ರ ಸಂಖ್ಯೆ: ಡಿಎಸ್ ಕೆ/ಎಸ್‌ಕೆ/32/2019-20, ದಿನಾಂಕ:27.06.2025 ಮತ್ತು 26.08.2025
4. ರಾಜ್ಯಾಧ್ಯಕ್ಷರು, ರಾಷ್ಟ್ರೀಯ ರೈತರ ಸಂಘ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಬೆಳಗಾವಿ ಇವರ ಮನವಿ
5. ಮಾನ್ಯ ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ವಿಶೇಷ ಕಾರ್ಯದರ್ಶಿಯವರ ದಿನಾಂಕ:06.11.2025ರ ಸಭಾ ಸೂಚನಾ ಪತ್ರಗಳು.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ, 2025-26ನೇ ಸಕ್ಕರೆ ಹಂಗಾಮಿನಲ್ಲಿ ದೇಶದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಸಕ್ಕರೆ ಕಾರ್ಖಾನೆಗಳು ಪಾವತಿಸಬೇಕಾದ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ (Fair and Remunerative Price) ಮಾರ್ಗಸೂಚಿಗಳನ್ನು ಕೇಂದ್ರ ಸರ್ಕಾರದ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯು ನಿಗದಿಗೊಳಿಸಲಾಗಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತವೆ.

1. ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.3550.00
2. ಶೇಕಡ 10.25ಕ್ಕೆ ಮೇಲ್ಪಟ್ಟ ಇಳುವರಿಗೆ ತದನಂತರದ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.3.46 ರಂತೆ ಹೆಚ್ಚುವರಿ ಬೆಲೆ..
3. ಶೇಕಡ 10.25ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕಿಂತ ಮೇಲ್ಪಟ್ಟ ಇಳುವರಿಯನ್ನು ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಿಸಿದಂತೆ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ರೂ.3.46ರಷ್ಟು ಪ್ರಮಾಣದಲ್ಲಿ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು.
4. ಶೇಕಡ 9.5 ರಷ್ಟು ಅಥವಾ 9.50 ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆ.ಟನ್‌ಗೆ ರೂ.3290.05 ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ ನಿಗದಿಪಡಿಸುವುದು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ, 2024-25ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳು ಪಡೆದ ಸಕ್ಕರೆ ಇಳುವರಿಯನ್ನು ಆಧರಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಪತ್ರದಲ್ಲಿ ನಿಗದಿಪಡಿಸಿದ ಮಾರ್ಗಸೂಚಿಗಳನ್ವಯ ರಾಜ್ಯದ ಸಕ್ಕರೆ ಕಾರ್ಖಾನೆಗಳು 2025-26ನೇ ಹಂಗಾಮಿನಲ್ಲಿ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ನಿಗದಿಪಡಿಸಿ. ಆಯುಕ್ತರು ಕಬ್ಬು ಅಬಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಆದೇಶಿಸಿರುತ್ತಾರೆ.

.....2

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರಗಳಲ್ಲಿ, ದಿನಾಂಕ:10.06.2025ರಂದು ಜರುಗಿದ ಕಬ್ಬು ನಿಯಂತ್ರಣ ಮಂಡಳಿ ಸಭೆಯಲ್ಲಿ ನಿರ್ಣಯಿಸಿದಂತೆ 2025-26ನೇ ಹಂಗಾಮಿನಲ್ಲಿ ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳು ಅನುಸರಿಸಬೇಕಾದ ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚದ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಮನವಿಯಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ ಮಾರ್ಗಸೂಚಿಗಳು ನ್ಯಾಯಯುತವಾಗಿ ಇಲ್ಲದೇ ಇರುವ ಕಾರಣ ರೈತರು ಬೆಳೆದ ಕಬ್ಬಿಗೆ ಸರಿಯಾದ ಬೆಲೆ ಸಿಗುತ್ತಿಲ್ಲವೆಂದು ಮತ್ತು ಉತ್ಪಾದನೆಗೆ ಆಗುವ ವೆಚ್ಚವನ್ನು ಗಣನೆಗೆ ತೆಗೆದುಕೊಳ್ಳದೇ ಇಳುವರಿ (Recovery) ಆಧಾರದ ಮೇಲೆ ಬೆಲೆ ನಿರ್ಧಾರವಾಗುತ್ತಿರುವುದರಿಂದ ಇಳುವರಿ ವರದಿಯು ಕೂಡ ಪಾರದರ್ಶಕವಾಗಿರುವುದಿಲ್ಲವೆಂದು ರೈತರಿಗೆ ಕಬ್ಬಿನ ದರದಲ್ಲಿ ವ್ಯತ್ಯಾಸವಾಗುತ್ತಿದ್ದು, ಕೇಂದ್ರ ಸರ್ಕಾರಕ್ಕೆ ಪತ್ರವನ್ನು ಬರೆದು ಸಮಸ್ಯೆಯನ್ನು ಪರಿಹರಿಸುವಂತೆ ಹಾಗೂ ಪ್ರಸ್ತುತ ವರ್ಷ ರೂ.3500.00 ಗಳ ಬೆಂಬಲ ಬೆಲೆಯನ್ನು ನೀಡುವಂತೆ ವಿನಂತಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಸಭಾ ಸೂಚನಾ ಪತ್ರಗಳಲ್ಲಿ, ನಿಗದಿಪಡಿಸಿರುವಂತೆ ದಿನಾಂಕ: 07.11.2025ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳ ಮಾಲೀಕರು / ಪ್ರತಿನಿಧಿಗಳೊಂದಿಗೆ ಮತ್ತು ರಾಜ್ಯದ ಕಬ್ಬು ಬೆಳಗಾರರು ಹಾಗೂ ರೈತ ಸಂಘಟನೆಗಳ ಮುಖಂಡರು ಮತ್ತು ಪ್ರತಿನಿಧಿಗಳೊಂದಿಗೆ ಸುಧೀರ್ಘವಾಗಿ ಸಭೆಯನ್ನು ಜರುಗಿಸಲಾಗಿರುತ್ತದೆ. ಸದರಿ ಸಭೆಯಲ್ಲಿ, ರಾಜ್ಯದ ಉತ್ತರ ಭಾಗದ ಕಬ್ಬು ನುರಿಸುವ ಹಂಗಾಮು ಪ್ರಾರಂಭವಾಗಿರುವುದರಿಂದ ರೈತರು ತಮ್ಮ ಕಬ್ಬಿಗೆ ಹೆಚ್ಚಿನ ಬೆಲೆಯನ್ನು ನಿಗದಿಪಡಿಸುವಂತೆ ಒತ್ತಾಯಿಸಿ ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲ್ಲೂಕಿನ ಗುರ್ಲಾಪುರ ಕ್ರಾಸ್‌ನಲ್ಲಿ ನಡೆಸುತ್ತಿರುವ ಪ್ರತಿಭಟನೆಯ ಕುರಿತು ಹಾಗೂ ಬೆಳಗಾವಿ ಜಿಲ್ಲೆಯ ವಿವಿಧ ಸಕ್ಕರೆ ಕಾರ್ಖಾನೆಗಳ ಮಾಲೀಕರು ಮತ್ತು ಪ್ರತಿನಿಧಿಗಳೊಂದಿಗೆ ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ಇವರು ನಡೆಸಿರುವ ಸಭೆಗಳ ಕುರಿತು ಹಾಗೂ ಪ್ರತಿಭಟನಾ ಸ್ಥಳದಲ್ಲಿ ರೈತ ಪ್ರತಿನಿಧಿಗಳೊಂದಿಗೆ ನಡೆಸಿದ ಸಂಧಾನ ಸಭೆಗಳ ಕುರಿತು ಚರ್ಚಿಸಲಾಯಿತು. ರೈತರ ಪ್ರತಿಭಟನೆಗಳು ಬಾಗಲಕೋಟೆ, ವಿಜಯಪುರ ಕಲಬುರಗಿ, ಹಾವೇರಿ ಮತ್ತು ಇತರೆ ಜಿಲ್ಲೆಗಳಲ್ಲಿಯೂ ತೀವ್ರ ಸ್ವರೂಪ ಪಡೆದುಕೊಂಡಿರುವ ಕುರಿತು ಜಿಲ್ಲಾಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯ ಗಮನಕ್ಕೆ ತಂದಿರುತ್ತಾರೆ.

ಕೇಂದ್ರ ಸರ್ಕಾರವು ರೈತರ ಕಬ್ಬಿಗೆ ನಿಗದಿಪಡಿಸಿರುವ ಎಫ್ ಆರ್ ಪಿ ಯು ರೈತರಿಗೆ ಒಪ್ಪಿಗೆಯಾಗದೇ ಇರುವುದರಿಂದ ಮತ್ತು ಅನೇಕ ಕಾರ್ಖಾನೆಗಳು ರೈತರೊಂದಿಗೆ ಸಹಕಾರ ಮನೋಭಾವದೊಂದಿಗೆ ವ್ಯವಹರಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್.ಆರ್.ಪಿ ಗಿಂತ ಹೆಚ್ಚಿನ ದರವನ್ನು ಹಿಂದಿನ ವರ್ಷಗಳಲ್ಲಿ ನೀಡಿರುವುದನ್ನು ಪರಿಗಣಿಸಿ, ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ 2025-26ನೇ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆಗಳು ಪಾವತಿಸಬೇಕಾದ ಕನಿಷ್ಠ ಹೆಚ್ಚುವರಿ ಕಬ್ಬು ಬೆಲೆಯನ್ನು ಇಳುವರಿ ಆಧಾರದ ಮೇಲೆ ನಿಗದಿಪಡಿಸಲು ಹಾಗೂ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವನ್ನು ನೀಡಲು ಸಭೆಯು ತೀರ್ಮಾನಿಸಿರುತ್ತದೆ. ಅದರಂತೆ ಸರ್ಕಾರದ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಐ 324 ಎಸ್‌ಜಿಎಫ್ 2025,**

**ಬೆಂಗಳೂರು, ದಿನಾಂಕ: 08 ನೇ ನವೆಂಬರ್, 2025**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2025-26ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಸಂಬಂಧಿಸಿದ ಸಕ್ಕರೆ ಕಾರ್ಖಾನೆಗಳು ಪಾವತಿಸಬೇಕಾದ ಕನಿಷ್ಟ ಹೆಚ್ಚುವರಿ ಕಬ್ಬು ಬೆಲೆಯನ್ನು ನಿಗದಿಪಡಿಸಲು ಹಾಗೂ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವನ್ನು ಒಂದು ಬಾರಿಯ ಕ್ರಮವಾಗಿ ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಿದೆ.

ಮಾನ್ಯ ಮುಖ್ಯಮಂತ್ರಿಗಳು ಸಕ್ಕರೆ ಕಾರ್ಖಾನೆಗಳು ಮತ್ತು ರೈತ ಮುಖಂಡರೊಂದಿಗೆ ನಡೆಸಿದ ಸಭೆಯಲ್ಲಿ ನಿರ್ಣಯಿಸಿದಂತೆ ನಿರ್ಧರಿಸಿದ ಕಬ್ಬು ದರಗಳು ಇಂತಿವೆ;

| ಇಳುವರಿ | ಎಫ್.ಆರ್.ಪಿ (ಪ್ರತಿ ಮೆ.ಟನ್‌ಗೆ) (ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಒಳಗೊಂಡಂತೆ) (ರೂ.ಗಳಲ್ಲಿ) | ಸಕ್ಕರೆ ಕಾರ್ಖಾನೆಗಳು ಮೊದಲಿನ ಕಂತಿನಲ್ಲಿ ರೈತರಿಗೆ ನೀಡಲು ಒಪ್ಪಿರುವ ಮೊತ್ತ ರೂ.ಗಳಲ್ಲಿ (ಪ್ರತಿ ಮೆ.ಟನ್ ಗೆ) (ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಹೊರತುಪಡಿಸಿ ) | ಎರಡನೇ ಕಂತಿನಲ್ಲಿ ಪಾವತಿಸಬೇಕಾದ ಮೊತ್ತ (ರೂ.ಗಳಲ್ಲಿ) | | | ಒಟ್ಟು ಮೊತ್ತ (ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಹೊರತುಪಡಿಸಿ) (ರೂ.ಗಳಲ್ಲಿ) |
|---|---|---|---|---|---|---|
| | | | ಸಕ್ಕರೆ ಕಾರ್ಖಾನೆಗಳು | ರಾಜ್ಯ ಸರ್ಕಾರ | ಒಟ್ಟು | |
| 1 | 2 | 3 | 4 | 5 | 6 | 7 (3 +6) |
| 9.5 % ಅಥವಾ ಕಡಿಮೆ | 3290.50 | ಕಾರ್ಖಾನೆಗಳು ಕೇಂದ್ರ ಸರ್ಕಾರದ ಎಫ್.ಆರ್.ಪಿ ದರದನ್ವಯ ರೈತರಿಗೆ ನೀಡಲು ಒಪ್ಪಿರುವ ಮೊತ್ತ | 50 | 50 | 100 | ಕಾಲಂ 3 ರಲ್ಲಿನ ಮೊತ್ತಕ್ಕೆ ಎರಡನೇ ಕಂತಿನ ರೂ.100.00 ಗಳನ್ನು ಸೇರಿಸಿ ರೈತರಿಗೆ ನೀಡಬೇಕಾದ ಮೊತ್ತ |
| 10.25% | 3550.00 | 3100.00 | 50 | 50 | 100 | 3200.00 |
| 11.25% | 3896.00 | 3200.00 | 50 | 50 | 100 | 3300.00 |

** 10.25 – 9.5 % ಸಕ್ಕರೆ ಇಳುವರಿ ಪ್ರಮಾಣ ನಡುವೆ ಪ್ರತಿ 0.1 % ಕಡಿಮೆ ಸಕ್ಕರೆ ಇಳುವರಿಗೆ ಅನುಪಾತಕ್ಕೆ ಅನುಗುಣವಾಗಿ ರೂ.3.46 ಮೊತ್ತವನ್ನು ಪ್ರತಿ ಕ್ವಿಂಟಾಲ್‌ಗೆ ಪರಿಗಣಿಸುವುದು.

...4

8/11/25

** 11.25 – 10.25 % ಸಕ್ಕರೆ ಇಳುವರಿ ಪ್ರಮಾಣದ ನಡುವೆ, ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಿದಂತೆ ಪ್ರತಿ 0.1 % ಕಡಿಮೆ ಸಕ್ಕರೆ ಇಳುವರಿಗೆ ಅನುಪಾತಕ್ಕೆ ಅನುಗುಣವಾಗಿ ರೂ.1.00 ಮೊತ್ತವನ್ನು ಪ್ರತಿ ಕ್ವಿಂಟಾಲ್‌ಗೆ ಪರಿಗಣಿಸುವುದು.

ಕಾರ್ಖಾನೆಗಳು ಪ್ರಥಮ ಕಂತಿನ ಮೊತ್ತವನ್ನು ಸಕ್ಕರೆ ನಿಯಂತ್ರಣ ಕಾಯ್ದೆಯಡಿಯಲ್ಲಿ ನಿಗದಿಪಡಿಸಿರುವಂತೆ 14 ದಿನಗಳಲ್ಲಿ ಹಣವನ್ನು ರೈತರಿಗೆ ಸಂದಾಯ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

([illegible]) ../11/25
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸಕ್ಕರೆ)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ (ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸುವಂತೆ ಕೋರಿದೆ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) & (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560 001
2. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560 001.
3. ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಲಕ್ಷ್ಮೀಟೇಕ, ಬೆಳಗಾವಿ-590 009
4. ನಿರ್ದೇಶಕರು, ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಲಕ್ಷ್ಮೀಟೇಕ, ಬೆಳಗಾವಿ-590 009
5. ಜಿಲ್ಲಾಧಿಕಾರಿಗಳು ಬೆಳಗಾವಿ ಜಿಲ್ಲೆ/ ಬಾಗಲಕೋಟೆ ಜಿಲ್ಲೆ/ ವಿಜಯಪುರ ಜಿಲ್ಲೆ/ಹಾವೇರಿ ಜಿಲ್ಲೆ/ಉತ್ತರ ಕನ್ನಡ ಜಿಲ್ಲೆ/ ಗದಗ ಜಿಲ್ಲೆ/ಕಲಬುರಗಿ ಜಿಲ್ಲೆ/ಬೀದರ್ ಜಿಲ್ಲೆ/ಯಾದಗಿರಿ ಜಿಲ್ಲೆ/ಬಳ್ಳಾರಿ ಜಿಲ್ಲೆ/ವಿಜಯನಗರ ಜಿಲ್ಲೆ/ದಾವಣಗೆರೆ ಜಿಲ್ಲೆ/ ಹಾಸನ ಜಿಲ್ಲೆ /ಮೈಸೂರು ಜಿಲ್ಲೆ / ಮಂಡ್ಯ ಜಿಲ್ಲೆ /ಚಾಮರಾಜನಗರ ಜಿಲ್ಲೆ
6. ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳ ವ್ಯವಸ್ಥಾಪಕ ನಿರ್ದೇಶಕರುಗಳು / ಕಾರ್ಯನಿರ್ವಹಣಾಧಿಕಾರಿಗಳು
7. ರಾಜ್ಯಾಧ್ಯಕ್ಷರು, ರಾಷ್ಟ್ರೀಯ ರೈತರ ಸಂಘ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಬೆಳಗಾವಿ
8. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
9. ಉಪ ನಿರ್ದೇಶಕರು ಖಜಾನೆ-2 ಖಜಾನೆ ಇಲಾಖೆ ಬೆಂಗಳೂರು-560009
10. ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
11. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
13. ಸರ್ಕಾರದ ಅಧೀನ ಕಾರ್ಯದರ್ಶಿ ಆರ್ಥಿಕ ಇಲಾಖೆ ( ಗಣಕ ಕೋಶ), ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ ಆರ್ಥಿಕ ಇಲಾಖೆ (ವೆಚ್ಚ-1 & ಬಂ.ಹೂ), ವಿಧಾನಸೌಧ, ಬೆಂಗಳೂರು

...5

15. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು
16. ಸರ್ಕಾರದ ಕಾರ್ಯದರ್ಶಿ(ಎಂಎಸ್ಎಂಇ ಮತ್ತು ಗಣಿ)ಯವರ ಆಪ್ತ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
17. ಸರ್ಕಾರದ ಉಪ ಕಾರ್ಯದರ್ಶಿ (ಸಕ್ಕರೆ)ಯವರ ಪತ್ರಾಂಕಿತ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸಸೌಧ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ವಿಶೇಷ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ ಬೆಂಗಳೂರು
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು